**Akashvani : Bangalore**
**National Bulletin In Kannada**
**16.02.2025 / 7.35 am**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**<><*<><>*><>**

ಮುಖ್ಯಾಂಶಗಳು

೧. ನವದೆಹಲಿಯಲ್ಲಿಂದು 'ಭಾರತ ಟೆಕ್ಸ್ ೨೦೨೫' ಸಮ್ಮೇಳನವನ್ನುದ್ದೇಶಿಸಿ ಪ್ರಧಾನಿ ಭಾಷಣ

೨. ಜಾಗತಿಕವಾಗಿ ಭಾರತದ ಮೇಲಿನ ವಿಶ್ವಾಸ ಎಂದಿಗಿಂತಲೂ ಬಲಗೊಳ್ಳುತ್ತಿದೆ - ಪ್ರಧಾನಿ ನರೇಂದ್ರ ಮೋದಿ

೩. ನವದೆಹಲಿ ರೈಲು ನಿಲ್ದಾಣದಲ್ಲಿ ಕಾಲ್ತುಳಿತ; ಕನಿಷ್ಠ ೧೫ ಮಂದಿ ಸಾವು; ಹಲವರಿಗೆ ಗಾಯ

೪. ಮಹಿಳಾ ಪ್ರೀಮಿಯರ್ ಲೀಗ್ ಕ್ರಿಕೆಟ್; ಮುಂಬೈ ಇಂಡಿಯನ್ಸ್ ವಿರುದ್ಧ ಡೆಲ್ಲಿ ಕ್ಯಾಪಿಟಲ್ಸ್‌ಗೆ ೨ ವಿಕೆಟ್ ಜಯ

**<><*<><>*><>**

ಪ್ರಧಾನಿ ನರೇಂದ್ರ ಮೋದಿ, ಇಂದು ರಾಷ್ಟ್ರ ರಾಜಧಾನಿ ನವದೆಹಲಿಯಲ್ಲಿ ಆಯೋಜಿಸಿರುವ 'ಭಾರತ ಟೆಕ್ಸ್ ೨೦೨೫' ಜಾಗತಿಕ ಸಮ್ಮೇಳನವನ್ನುದ್ದೇಶಿಸಿ ಮಾತನಾಡಲಿದ್ದಾರೆ. ನವದೆಹಲಿಯ ಭಾರತ ಮಂಟಪಂನಲ್ಲಿ ಏರ್ಪಡಿಸಲಾಗಿರುವ ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ ಸಂಜೆ ಭಾಗವಹಿಸಲಿದ್ದಾರೆ ಎಂದು ಪ್ರಧಾನಮಂತ್ರಿ ಕಾರ್ಯಾಲಯ ಪ್ರಕಟಣೆ ತಿಳಿಸಿದೆ. ಇದೇ ೧೪ ರಿಂದ ೧೭ರವರೆಗೆ ಏರ್ಪಡಿಸಲಾಗಿರುವ ವಿಶಿಷ್ಟ ಕಾರ್ಯಕ್ರಮದಲ್ಲಿ, ಕಚ್ಚಾ ವಸ್ತುಗಳು, ಬಿಡಿಭಾಗಗಳು ಸೇರಿದಂತೆ ಸಿದ್ಧಪಡಿಸಿದ ಉತ್ಪನ್ನಗಳವರೆಗಿನ ಸಂಪೂರ್ಣ ಜವಳಿ ಮೌಲ್ಯ ಸರಪಳಿಯನ್ನು ಒಂದೇ ಸೂರಿನಡಿ ತರುವ ಉದ್ದೇಶ ಸಾಕಾರಗೊಳ್ಳಲಿದೆ. ಈ ಕಾರ್ಯಕ್ರಮವು, ಅಧಿವೇಶನ, ದುಂಡು ಮೇಜಿನ ಚರ್ಚೆಗಳು ಮತ್ತು ಕಾರ್ಯಾಗಾರಗಳನ್ನು ಒಳಗೊಂಡ ಜಾಗತಿಕ ಮಟ್ಟದ ಸಮ್ಮೇಳನವಾಗಲಿದೆ. ೨೦೨೩ರಲ್ಲಿ ೩೪ ಶತಕೋಟಿ ಡಾಲರ್ ಮೌಲ್ಯದ ಜವಳಿ ಮತ್ತು ಉಡುಪು ರಫ್ತು ಮಾಡುವುದರ ಮೂಲಕ ಭಾರತ ವಿಶ್ವದ ಆರನೇ ಅತಿ ದೊಡ್ಡ ರಫ್ತು ರಾಷ್ಟ್ರವಾಗಿ ಹೊರಹೊಮ್ಮಿತ್ತು. ೪೫ ಮಿಲಿಯನ್‌ಗೂ ಹೆಚ್ಚು ಜನರು ಈ ಕ್ಷೇತ್ರದಲ್ಲಿ ಉದ್ಯೋಗ ಪಡೆದಿದ್ದಾರೆ. ೧೨೦ ದೇಶಗಳ ೬ ಸಾವಿರ ಅಂತರಾಷ್ಟ್ರೀಯ ಖರೀದಿದಾರರು, ೫ ಸಾವಿರ ಪ್ರದರ್ಶಕರು, ನೀತಿ

ನಿರೂಪಕರು, ಜಾಗತಿಕ ಕಂಪನಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಿದ್ದಾರೆ.

<><*<><>*><>

ಭಾರತ ಭವಿಷ್ಯದ ಜಾಗತಿಕ ಚರ್ಚೆಗಳ ಕೇಂದ್ರಬಿಂದು ಮಾತ್ರವಲ್ಲದೆ ಈಗ ಚಿಂತನ ಮಂಥನಗಳನ್ನು ನೇತೃತ್ವವಹಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.  ದೆಹಲಿಯಲ್ಲಿ ನಿನ್ನೆ ಮಾಧ್ಯಮ ಸಂಸ್ಥೆಯೊಂದು ಆಯೋಜಿಸಿದ್ದ ಶೃಂಗಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಜಾಗತಿಕವಾಗಿ ಭಾರತ ಹಿಂದೆಂದೂ ಅನುಭವಿಸದ ಸ್ಥಾನಮಾನವನ್ನು ಈಗ ಹೊಂದಿದೆ. ಪ್ರಮುಖ ರಾಷ್ಟ್ರಗಳಾಗಲಿ ಅಥವಾ ಜಾಗತಿಕ ವೇದಿಕೆಗಳಾಗಲಿ, ಭಾರತದ ಮೇಲಿನ ವಿಶ್ವಾಸವು ಎಂದಿಗಿಂತಲೂ ಬಲವಾಗಿದೆ ಎಂದು ತಿಳಿಸಿದರು. ೨೦೧೪ ರಿಂದ ಭಾರತ, ಅಭಿವೃದ್ಧಿ ಪಥದಲ್ಲಿ ತ್ವರಿತಗತಿಯಲ್ಲಿ ಸಾಗಿದೆ. ಕೇವಲ ಒಂದು ದಶಕದಲ್ಲಿ ಭಾರತವು ವಿಶ್ವದ ಅಗ್ರ ಐದು ಆರ್ಥಿಕತೆಗಳಲ್ಲಿ ಒಂದಾಗಿದ್ದು, ಮುಂಬರುವ ವರ್ಷಗಳಲ್ಲಿ ಮೂರನೇ ಅತಿದೊಡ್ಡ ಆರ್ಥಿಕತೆಯಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.  ವಿಕಿಸಿತ ಭಾರತವಾಗುವ ದೇಶದ ಪಯಣದಲ್ಲಿ ಖಾಸಗಿ ವಲಯವನ್ನು ತಮ್ಮ ಸರ್ಕಾರವು ಪ್ರಮುಖ ಪಾಲುದಾರನಾಗಿ ನೋಡುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

ಧ್ವನಿ: ಪ್ರಧಾನಿ ನರೇಂದ್ರ ಮೋದಿ

<><*<><>*><>

ನವದೆಹಲಿ ರೈಲು ನಿಲ್ದಾಣದಲ್ಲಿ ಪ್ರಯಾಗ್‌ರಾಜ್‌ಗೆ ಪ್ರಯಾಣ ಬೆಳೆಸುತ್ತಿದ್ದ ರೈಲನ್ನು ಹಿಡಿಯುವ ಸಂದರ್ಭದಲ್ಲಿ ನೂಕುನುಗ್ಗಲು ಉಂಟಾದ ಪರಿಣಾಮ ನಿನ್ನೆ ರಾತ್ರಿ ಕಾಲ್ತುಳಿತ ಸಂಭವಿಸಿದ್ದು, ಕನಿಷ್ಠ ೧೫ ಮಂದಿ ಸಾವನ್ನಪ್ಪಿದ್ದಾರೆ. ದೆಹಲಿಯ ಆಸ್ಪತ್ರೆಯ ಹಿರಿಯ ಅಧಿಕಾರಿಯೊಬ್ಬರು ಈ ಕುರಿತು ದೃಢಪಡಿಸಿದ್ದಾರೆ. ರೈಲು ನಿಲ್ದಾಣದ ೧೪ ಹಾಗೂ ೧೫ನೇ ಪ್ಲಾಟ್‌ಫಾರ್ಮ್‌ಗಳಲ್ಲಿ ನಿನ್ನೆ ರಾತ್ರಿ ೮ ಗಂಟೆಯ ಸುಮಾರಿಗೆ ಜನ ದಟ್ಟಣೆಯ ನಡುವೆ ಪರಿಸ್ಥಿತಿ ಅಸ್ತವ್ಯಸ್ತಗೊಂಡಿತು. ಅಧಿಕಾರಿಗಳ ಪ್ರಕಾರ ನಿಲ್ದಾಣದಲ್ಲಿ ಪರಿಸ್ಥಿತಿಯನ್ನು ನಿಯಂತ್ರಿಸಲು ಹೆಚ್ಚುವರಿ ಭದ್ರತಾ ಸಿಬ್ಬಂದಿಯನ್ನು ನಿಯೋಜಿಸಲಾಗಿದ್ದು, ಕನಿಷ್ಠ ४ ಅಗ್ನಿಶಾಮಕ ವಾಹನಗಳನ್ನು ಸ್ಥಳಕ್ಕೆ ಕಳುಹಿಸಲಾಗಿದೆ. ಘಟನೆ ಕುರಿತು ಪ್ರಧಾನಿ ನರೇಂದ್ರ ಮೋದಿ, ದುಃಖ ವ್ಯಕ್ತಪಡಿಸಿದ್ದು, ಕಾಲ್ತುಳಿತದಲ್ಲಿ ಮೃತರಾದವರ ಕುಟುಂಬಗಳಿಗೆ ಸಂತಾಪ ಸೂಚಿಸಿದ್ದಾರೆ. ಹಾಗೆಯೇ ಗಾಯಗೊಂಡವರ ಶೀಘ್ರ ಚೇತರಿಕೆಗೆ ಪ್ರಾರ್ಥಿಸಿದ್ದಾರೆ. ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಕೂಡ ಘಟನೆ ಕುರಿತು ಸಂತಾಪ ಸೂಚಿಸಿದ್ದಾರೆ.

ಗೃಹ ಸಚಿವ ಅಮಿತ್ ಶಾ, ಪರಿಸ್ಥಿತಿ ಕುರಿತು, ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್, ದೆಹಲಿ ಲೆಫ್ಟಿನೆಂಟ್ ಗವರ್ನರ್ ವಿ.ಕೆ.ಸೆಕ್ಸೇನಾ ಮತ್ತು ಇತರ ಅಧಿಕಾರಿಗಳೊಂದಿಗೆ ಚರ್ಚಿಸಲಾಗಿದೆ ಎಂದು ತಿಳಿಸಿದ್ದಾರೆ. ದೆಹಲಿ ಲೆಫ್ಟಿನೆಂಟ್ ಗವರ್ನರ್ ವಿ.ಕೆ.ಸೆಕ್ಸೇನಾ ಘಟನೆ ಕುರಿತು ದುಃಖ ವ್ಯಕ್ತಪಡಿಸಿದ್ದು, ಸಂತ್ರಸ್ಥ ಕುಟುಂಬಗಳಿಗೆ ಸಂತಾಪ ಸೂಚಿಸಿದ್ದಾರೆ. ಜೊತೆಗೆ ಆಸ್ಪತ್ರೆಗೆ ತೆರಳಿ ಗಾಯಗೊಂಡವರಿಗೆ ಒದಗಿಸಲಾಗಿರುವ ವ್ಯವಸ್ಥೆಗಳ ಕುರಿತು ಅವರು ಪರಿಶೀಲನೆ ನಡೆಸಿದ್ದಾರೆ. ದೆಹಲಿಯ ರೈಲ್ವೆ ನಿಲ್ದಾಣದಲ್ಲಿ ಸಂಭವಿಸಿದ್ದ ಕಾಲ್ತುಳಿತ ಕುರಿತಂತೆ ಬೇಸರ ವ್ಯಕ್ತಪಡಿಸಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು, ಸಾಮಾಜಿಕ ಮಾಧ್ಯಮ ಮೂಲಕ ಸಂತ್ರಸ್ಥ ಕುಟುಂಬಗಳಿಗೆ ಸಂತಾಪ ವ್ಯಕ್ತಪಡಿಸಿ, ಗಾಯಗೊಂಡವರ ಶೀಘ್ರ ಚೇತರಿಕೆಗೆ ಪ್ರಾರ್ಥಿಸಿದ್ದಾರೆ.

<><*<><>*><>

ಉತ್ತರಪ್ರದೇಶದ ಪ್ರಯಾಗರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭಮೇಳದ ತ್ರಿವೇಣಿ ಸಂಗಮದ ಸಮೀಪ ಇಂದು ಪ್ರಕೃತಿ ಮತ್ತು ಪಕ್ಷಿ ಉತ್ಸವ-೨೦೨೫ ಕ್ಕೆ ಚಾಲನೆ ದೊರೆಯಲಿದೆ. ನಂಬಿಕೆ ಮತ್ತು ಸಂರಕ್ಷಣೆಯ ಸಂಕೇತವಾಗಿ ಭಾರತೀಯ ಸ್ಕಿಮ್ಮರ್ ಅನ್ನು ಉತ್ಸವದ ಮ್ಯಾಸ್ಕಾಟ್ ಆಗಿ ಆಯ್ಕೆ ಮಾಡಲಾಗಿದೆ. ಉತ್ತರಪ್ರದೇಶದಲ್ಲಿ, ಸ್ಕಿಮ್ಮರ್ ಪಕ್ಷಿಯು ಗಂಗಾ, ಯಮುನಾ ಮತ್ತು ಚಂಬಲ್ ನದಿಗಳ ಉದ್ದಕ್ಕೂ ಸಂತಾನೋತ್ಪತ್ತಿ ಮಾಡುತ್ತದೆ. ಇದು ರಾಜ್ಯದಲ್ಲಿ ಸುಮಾರು ೧ ಸಾವಿರ ಸಂತತಿ ಹೊಂದಿದೆ. ಕಿತ್ತಳೆ ಬಣ್ಣದ ಕೊಕ್ಕು ಮತ್ತು ಕಪ್ಪು-ಬಿಳಿ ಪುಕ್ಕಗಳಿಗೆ ಹೆಸರುವಾಸಿಯಾದ ಭಾರತೀಯ ಸ್ಕಿಮ್ಮರ್, ನದಿಗಳು, ಸರೋವರಗಳು ಮತ್ತು ನದಿ ದಡದಲ್ಲಿರುವ ಜೌಗು ಪ್ರದೇಶಗಳಲ್ಲಿ ಕಾಣಸಿಗುತ್ತವೆ. ಮಹಾಕುಂಭಮೇಳದಲ್ಲಿ ಈ ವಿಶಿಷ್ಟ ಕಾರ್ಯಕ್ರಮವನ್ನು ಆಯೋಜಿಸುವ ಮೂಲಕ, ನಂಬಿಕೆ ಮತ್ತು ಪ್ರಕೃತಿ ಸಂರಕ್ಷಣೆಯ ವಿಶಿಷ್ಟ ಸಂಗಮವನ್ನು ಈ ಉತ್ಸವ ಪ್ರಸ್ತುತಪಡಿಸಲಿದೆ. ಪಕ್ಷಿ ಉತ್ಸವದ ನೋಡಲ್ ಅಧಿಕಾರಿ ಲಲಿತ್ ವರ್ಮಾ ಮಾತನಾಡಿ, ಭಾರತೀಯ ಸ್ಕಿಮ್ಮರ್ ಅನ್ನು ಅದರ ಸಂರಕ್ಷಣೆಯ ಬಗ್ಗೆ ಜಾಗೃತಿ ಮೂಡಿಸಲು ಆಯ್ಕೆ ಮಾಡಲಾಗಿದೆ ಎಂದು ಅವರು ಹೇಳಿದರು. "ಕುಂಭ್ ಕಿ ಆಸ್ತ ಏವಂ ಜಲವಾಯು ಪರಿವರ್ತನ್" ಎಂಬ ವಿಷಯದ ಕುರಿತು ಇಂದು ಮಹಾಕುಂಭದಲ್ಲಿ ಹವಾಮಾನ ಸಮ್ಮೇಳನವೂ ನಡೆಯಲಿದೆ. ಈ ಸಮ್ಮೇಳನವನ್ನು ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಉದ್ಘಾಟಿಸಲಿದ್ದಾರೆ ಕಾರ್ಯಕ್ರಮದಲ್ಲಿ ಧಾರ್ಮಿಕ ಮುಖಂಡರು, ಪರಿಸರವಾದಿಗಳು, ಸಾಮಾಜಿಕ ಸಂಸ್ಥೆಗಳು, ಕೈಗಾರಿಕಾ ಪ್ರತಿನಿಧಿಗಳು, ವ್ಯಾಪಾರ ಮುಖಂಡರು ಮತ್ತಿತರರು ಭಾಗವಹಿಸಲಿದ್ದಾರೆ.

<><*<><>*><>

ಪ್ರಧಾನಿ ನರೇಂದ್ರ ಮೋದಿ ಅವರ ಆಹ್ವಾನದ ಮೇರೆಗೆ ಕತಾರ್ ಅಮೀರ್ ಶೇಖ್ ತಮೀಮ್ ಬಿನ್ ಹಮದ್ ಅಲ್-ಥಾನಿ ನಾಳೆ ಮತ್ತು ನಾಡಿದ್ದು, ಭಾರತಕ್ಕೆ ಅಧಿಕೃತ ಭೇಟಿ ನೀಡಲಿದ್ದಾರೆ. ಅವರೊಂದಿಗೆ ಸಚಿವರು, ಹಿರಿಯ ಅಧಿಕಾರಿಗಳು ಮತ್ತು ವ್ಯಾಪಾರ ನಿಯೋಗ ಸೇರಿದಂತೆ ಉನ್ನತ ಮಟ್ಟದ ನಿಯೋಗ ಭಾರತಕ್ಕೆ ಭೇಟಿ ನೀಡಲಿದೆ. ಭಾರತಕ್ಕೆ ಕತಾರ್ ಅಮೀರ್ ಅವರ ಎರಡನೇ ಭೇಟಿ ಇದಾಗಿದೆ ಎಂದು ವಿದೇಶಾಂಗ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ಅವರು ಈ ಹಿಂದೆ ಮಾರ್ಚ್ ೨೦೧೫ ರಲ್ಲಿ ಭಾರತಕ್ಕೆ ಭೇಟಿ ನೀಡಿದ್ದರು. ಶೇಖ್ ತಮೀಮ್ ಬಿನ್ ಹಮದ್ ಅಲ್-ಥಾನಿ ಅವರಿಗೆ ಇದೇ ೧೮ ರಂದು ರಾಷ್ಟ್ರಪತಿ ಭವನದ ಆವರಣದಲ್ಲಿ ಔಪಚಾರಿಕ ಸ್ವಾಗತ ನೀಡಲಾಗುವುದು, ಅಮೀರ್ ಅವರು ತಮ್ಮ ಭೇಟಿಯ ಸಮಯದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರೊಂದಿಗೆ ಚರ್ಚೆ ನಡೆಸಲಿದ್ದಾರೆ. ಈ ನಡುವೆ ರಾಷ್ಟ್ರಪತಿಯವರು ಅಮೀರ್ ಅವರಿಗೆ ಗೌರವಾರ್ಥವಾಗಿ ಔತಣಕೂಟವನ್ನು ಸಹ ಆಯೋಜಿಸಲಿದ್ದಾರೆ. ಅಮೀರ್ ಅವರು ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ದ್ವಿಪಕ್ಷೀಯ ಸಂಬಂಧಗಳ ವಿವಿಧ ಅಂಶಗಳನ್ನು ಒಳಗೊಂಡ ವಿಸ್ತೃತ ಚರ್ಚೆ ನಡೆಸಲಿದ್ದಾರೆ.ಭಾರತ ಮತ್ತು ಕತಾರ್ ಸ್ನೇಹ, ವಿಶ್ವಾಸ ಮತ್ತು ಪರಸ್ಪರ ಗೌರವದ ಆಳವಾದ ಐತಿಹಾಸಿಕ ಸಂಬಂಧಗಳನ್ನು ಹೊಂದಿವೆ. ಇತ್ತೀಚಿನ ವರ್ಷಗಳಲ್ಲಿ, ವ್ಯಾಪಾರ, ಹೂಡಿಕೆ, ಇಂಧನ, ತಂತ್ರಜ್ಞಾನ, ಸಂಸ್ಕೃತಿ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲಿ ಎರಡೂ ದೇಶಗಳ ನಡುವಿನ ಸಂಬಂಧಗಳು ಬಲಗೊಳ್ಳುತ್ತಲೇ ಇವೆ. ಅಲ್ಲಿ ವಾಸಿಸುವ ಭಾರತೀಯ ಸಮುದಾಯವು ಕತಾರ್‌ನ ಅತಿದೊಡ್ಡ ವಲಸಿಗ ಸಮುದಾಯವಾಗಿದೆ. ಕತಾರ್ ಅಮೀರ್ ಅವರ ಭಾರತ ಭೇಟಿಯು ಬೆಳೆಯುತ್ತಿರುವ ಬಹುಮುಖ ಪಾಲುದಾರಿಕೆಗೆ ಮತ್ತಷ್ಟು ವೇಗವನ್ನು ನೀಡಲಿದೆ.

<><*<><>*><>

ಮಹಿಳಾ ಪ್ರೀಮಿಯರ್ ಲೀಗ್-ಡಬ್ಲ್ಯುಪಿಎಲ್ ೨೦೨೫ ಕ್ರಿಕೆಟ್ ಪಂದ್ಯಾವಳಿಯಲ್ಲಿ ವಡೋದರದ ಕೋಟಂಬಿ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ವಿರುದ್ಧ ಡೆಲ್ಲಿ ಕ್ಯಾಪಿಟಲ್ಸ್ ತಂಡ ೨ ವಿಕೆಟ್‌ಗಳ ಜಯ ಸಾಧಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಮುಂಬೈ, ೧೯.೧ ಓವರ್‌ಗಳಲ್ಲಿ ತನ್ನೆಲ್ಲಾ ವಿಕೆಟ್ ಕಳೆದುಕೊಂಡು ೧೬೪ ರನ್ ಗಳಿಸಿತು. ಗುರಿ ಬೆನ್ನತ್ತಿದ ಡೆಲ್ಲಿ ನಿಗದಿತ ೨೦ ಓವರ್‌ಗಳಲ್ಲಿ ೮ ವಿಕೆಟ್ ನಷ್ಟಕ್ಕೆ ೧೬೫ ರನ್‌ಗಳಿಸಿ ಗೆಲುವು ತನ್ನದಾಗಿಸಿಕೊಂಡಿತು. ಇಂದು ಇದೇ ಕ್ರೀಡಾಂಗಣದಲ್ಲಿ ನಡೆಯಲಿರುವ ಪಂದ್ಯದಲ್ಲಿ ಗುಜರಾತ್ ಜೈಂಟ್ಸ್ ಹಾಗೂ ಯುಪಿ ವಾರಿಯರ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ ಕ್ಕೆ ಆರಂಭವಾಗಲಿದೆ.

<><*<><>*><>

ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್, ಮ್ಯೂನಿಚ್‌ನಲ್ಲಿ ನಾರ್ವೆಯ ಹಣಕಾಸು ಸಚಿವ ಹಾಗೂ ಮ್ಯೂನಿಚ್ ಭದ್ರತಾ ಸಮ್ಮೇಳನದ ಅಧ್ಯಕ್ಷ ಜೆನ್ಸ್ ಸ್ಟಾಟೆನ್ ಬರ್ಗ್ ಅವರನ್ನು ಭೇಟಿಯಾದರು. ವಿಕಸನಗೊಳ್ಳುತ್ತಿರುವ ಜಾಗತಿಕ ಭದ್ರತಾ ವ್ಯವಸ್ಥೆಯ ಕುರಿತು ಉಭಯ ನಾಯಕರು, ವಿಚಾರ ವಿನಿಮಯ ಮಾಡಿಕೊಂಡರು. ಸಮ್ಮೇಳನದ ನೇಪಥ್ಯದಲ್ಲಿ ಡಾ.ಎಸ್.ಜೈಶಂಕರ್ ಅರ್ಜೆಂಟಿನಾದ ವಿದೇಶಾಂಗ ಮತ್ತು ವ್ಯಾಪಾರ ಸಚಿವ ಗೆರಾರ್ಡೋ ವರ್ಥೀನ್ ಅವರನ್ನು ಭೇಟಿಯಾದರು. ಸಾಮಾಜಿಕ ಮಾಧ್ಯಮದಲ್ಲಿ ಸಚಿವರು, ಭಾರತ-ಅರ್ಜೆಟಿನಾ ವ್ಯಾಪಾರ ಮತ್ತು ಹೂಡಿಕೆಯ ವ್ಯಾಪ್ತಿಯನ್ನು ವಿಸ್ತರಿಸುವ ಕುರಿತಂತೆ ಚರ್ಚಿಸಲಾಯಿತು. ಇದೇ ವೇಳೆ ಜಾಗತಿಕ ವಿಷಯಗಳ ಕುರಿತು ಸಮಾಲೋಚನೆ ನಡೆಸಲಾಗಿದೆ ಎಂದು ತಿಳಿಸಿದ್ದಾರೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <>*><>